# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1636(1980)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಬಗ್ಗೆ

(ಅ) ರಾಜ್ಯದ ಸಕ್ಕರೆ ಸಂಶೋಧನಾ ಸಂಸ್ಥೆಯಾದ ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯು ಮೂಲ ಸೌಲಭ್ಯಗಳ ಕೊರತೆಯಿಂದ ಚಟುವಟಿಕೆಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ಸಕ್ಕರೆ ಸಂಸ್ಥೆಯನ್ನು ಮುಂಬಯಿಯ ವಸಂತದಾದಾ ಸಕ್ಕರೆ ಸಂಶೋಧನಾ ಸಂಸ್ಥೆ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಇಲ್ಲಿಯವರೆಗಿನ ಸಂಸ್ಥೆಯ ಬೆಳವಣಿಗೆ ಮತ್ತು ಪ್ರಗತಿಯ ವಿವರ ಒದಗಿಸುವುದು; ಮತ್ತು ಸಂಸ್ಥೆಯ ಆರ್ಥಿಕ ಸಾಫಲ್ಯತೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ದೇಶದಲ್ಲಿ ಜೈವಿಕ ಇಂಧನಗಳು ಪ್ರಗತಿ ಕಾಣುತ್ತಿರುವ ಹಿನ್ನಲೆಯಲ್ಲಿ ರಾಜ್ಯವು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನುಒಂದು ಮಾದರಿ "ಶ್ರೇಷ್ಠ ಹಸಿರು ಇಂಧನ ಕೇಂದ್ರ" ವಾಗಿ (Center of Excellence for Green Energy) ಸ್ಥಾಪಿಸಲು ಕೈಗೊಂಡಿರುವ ಕ್ರಮಗಳೇನು?